**All India Radio: Bangalore**
**National Bulletins In Kannada**
**26.07.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.07.2025 / 19.35 hrs**

**<><*<><>*><>**

ಮುಖ್ಯಾಂಶಗಳು

- ಮಾಲ್ಡೀವ್ಸ್ ಸ್ವಾತಂತ್ರ್ಯೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಪ್ರಧಾನಿ ನರೇಂದ್ರ ಮೋದಿ ಭಾಗಿ

- ಸಂಸದೀಯ ಪ್ರಜಾಪ್ರಭುತ್ವಕ್ಕೆ ನೀಡಿದ ಸುಸ್ಥಿರ ಕೊಡುಗೆಗಾಗಿ ಹದಿನೇಳು ಸಂಸದರಿಗೆ ಸಂಸದ ರತ್ನ ಪ್ರಶಸ್ತಿ

- ೧೨೪ನೇ ಮನ್ ಕಿ ಬಾತ್‌ನ ಆವೃತ್ತಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ದೇಶವನ್ನುದ್ದೇಶಿಸಿ ಭಾಷಣ

- ಫಿಡೆ ಮಹಿಳಾ ವಿಶ್ವಕಪ್ ಚೆಸ್ ಚಾಂಪಿಯನ್‌ಶಿಪ್; ಪ್ರಶಸ್ತಿಗಾಗಿ ಭಾರತದವೇ ಆದ ಕೊನೆರು ಹಂಪಿ- ದಿವ್ಯಾ ದೇಶ್‌ಮುಖ್ ಹಣಾಹಣಿ

- ಆಂಡರ್ಸನ್-ತೆಂಡೂಲ್ಕರ್ ಟೆಸ್ಟ್ ಕ್ರಿಕೆಟ್; ಇಂಗ್ಲೆಂಡ್ ನೀಡಿರುವ ೩೧೧ ರನ್‌ಗಳ ಗುರಿ ಬೆನ್ನತ್ತಿರುವ ಭಾರತ

**<><*<><>*><>**

ಮಾಲ್ಡೀವ್ಸ್ ರಾಜಧಾನಿ ಮಾಲೆಯಲ್ಲಿರುವ ರಿಪಬ್ಲಿಕ್ ಸ್ಕ್ವೇರ್‌ನಲ್ಲಿ ನಡೆದ ೬೦ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ 'ಗೌರವ ಅತಿಥಿ'ಯಾಗಿ ಪಾಲ್ಗೊಂಡಿದ್ದರು. ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಝು , ನರೇಂದ್ರ ಮೋದಿ ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಮಾಲ್ಡೀವ್ಸ್ ರಕ್ಷಣಾ ಪಡೆಗಳ ಗೌರವದೊಂದಿಗೆ ಸಮಾರಂಭ ಪ್ರಾರಂಭವಾಯಿತು. ಅದ್ಭುತ ಮಿಲಿಟರಿ ಮೆರವಣಿಗೆಯ ಮೂಲಕ ಮಾಲ್ಡೀವ್ಸ್ ದೇಶದ ಶಕ್ತಿ, ಶಿಸ್ತು ಮತ್ತು ಏಕತೆಯನ್ನು ಪ್ರದರ್ಶಿಸಲಾಯಿತು. ಪ್ರಧಾನ ಮಂತ್ರಿ ಮೋದಿ, ಅಧಿಕಾರಿಗಳು ಮತ್ತು ಗಣ್ಯರನ್ನು

ಸ್ವಾಗತಿಸುವುದರೊಂದಿಗೆ ಆಚರಣೆ ಮುಕ್ತಾಯವಾಯಿತು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ, ಮಾಲ್ಡೀವ್ಸ್ ಉಪಾಧ್ಯಕ್ಷ ಹುಸೇನ್ ಮೊಹಮ್ಮದ್ ಲತೀಫ್ ಅವರೊಂದಿಗೆ ಮಹತ್ವದ ಸಭೆ ನಡೆಸಿದರು. ಮೂಲಸೌಕರ್ಯ, ತಂತ್ರಜ್ಞಾನ, ಹವಾಮಾನ ಬದಲಾವಣೆ, ಇಂಧನ ಮತ್ತು ಇತರ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸಿದ ಭಾರತ-ಮಾಲ್ಡೀವ್ಸ್ ಸ್ನೇಹದ ಪ್ರಮುಖ ಅಂಶಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಎರಡೂ ರಾಷ್ಟ್ರಗಳ ನಡುವಿನ ನಿಕಟ ಸಹಯೋಗವು, ಜನರಿಗೆ ಹೆಚ್ಚಿನ ಪ್ರಯೋಜನವನ್ನು ನೀಡಿದೆ ಮತ್ತು ಮುಂಬರುವ ವರ್ಷಗಳಲ್ಲಿ ಉಭಯ ದೇಶಗಳು ತಮ್ಮ ಪಾಲುದಾರಿಕೆಯನ್ನು ಇನ್ನಷ್ಟು ಗಾಢವಾಗಿಸಲು ಎದುರು ನೋಡುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇನ್ನು ಪ್ರತ್ಯೇಕ ಸಭೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ, ಮಾಲ್ಡೀವ್ಸ್ ಸಂಸತ್ ಸಭಾಧ್ಯಕ್ಷ ಅಬ್ದುಲ್ ರಹೀಂ ಅಬ್ದುಲ್ಲಾ ಅವರೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ಸಂಸತ್ತುಗಳ ನಡುವಿನ ನಿಕಟ ಸಂಬಂಧ ಸೇರಿದಂತೆ ಭಾರತ-ಮಾಲ್ಡೀವ್ಸ್ ಸ್ನೇಹದ ಬಗ್ಗೆ ಮಾತುಕತೆ ನಡೆಸಿದರು. ಇನ್ನು ಮಾಲ್ಡೀವ್ಸ್‌ನ ಮಾಜಿ ಅಧ್ಯಕ್ಷ ಮೊಹಮ್ಮದ್ ನಶೀದ್ ಅವರನ್ನೂ ಪ್ರಧಾನಿ ಮೋದಿ ಭೇಟಿಯಾಗಿದ್ದಾರೆ. ಭಾರತದ 'ನೆರೆಹೊರೆ ಮೊದಲು' ನೀತಿ ಮತ್ತು ಮಹಾಸಾಗರ ದೃಷ್ಟಿಕೋನದ ಮೌಲ್ಯಯುತ ಆಧಾರಸ್ತಂಭವಾಗಿ ಮಾಲ್ಡೀವ್ಸ್‌ನ ಪ್ರಾಮುಖ್ಯತೆಯ ಮೇಲೆ ಚರ್ಚೆ ನಡೆಸಲಾಯಿತು. ಸಾಮರ್ಥ್ಯ ವೃದ್ಧಿ ಮತ್ತು ಅಭಿವೃದ್ಧಿ ಸಹಕಾರದ ಮೂಲಕ ಭಾರತ ಮಾಲ್ಡೀವ್ಸ್‌ಗೆ ಬೆಂಬಲ ನೀಡುವುದನ್ನು ಮುಂದುವರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದರು.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಬ್ರಿಟನ್ ಮತ್ತು ಮಾಲ್ಡೀವ್ಸ್ ರಾಷ್ಟ್ರಗಳ ಪ್ರವಾಸ ಪೂರ್ಣಗೊಳಿಸಿರುವ ಅವರು, ನೇರವಾಗಿ ಟುಟಿಕೋರಿನ್‌ಗೆ ಪ್ರಯಾಣ ಬೆಳಸಲಿದ್ದಾರೆ. ಇಂದು ರಾತ್ರಿ ಟುಟಿಕೋರಿನ್‌ನಲ್ಲಿ ಪ್ರಧಾನಿಯವರು ೪ ಸಾವಿರದ ೮೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ರಾಷ್ಟ್ರಕ್ಕೆ ಸಮರ್ಪಿಸಿ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

**<><*<><>*><>**

ಸಂಸದೀಯ ಪ್ರಜಾಪ್ರಭುತ್ವಕ್ಕೆ ನೀಡಿದ ಸುಸ್ಥಿರ ಕೊಡುಗೆಗಾಗಿ ಹದಿನೇಳು ಸಂಸದರಿಗೆ ೨೦೨೫ ರ ಸಂಸದ ರತ್ನ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗಿದೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿಜೆಪಿಯ ರವಿ ಕಿಶನ್ ಮತ್ತು ದಿನೇಶ್ ಶರ್ಮಾ, ಕಾಂಗ್ರೆಸ್‌ನ ವರ್ಷಾ ಗಾಯಕ್ವಾಡ್, ಎನ್‌ಸಿಪಿ-ಎಸ್‌ಪಿಯ ಸುಪ್ರಿಯಾ ಸುಳೆ ಮತ್ತು ಶಿವಸೇನೆ-ಯುಬಿಟಿಯ ಅರವಿಂದ್ ಸಾವಂತ್ ಸೇರಿದಂತೆ ಹದಿನೇಳು ಸಂಸದರಿಗೆ 'ಸಂಸದ ರತ್ನ ಪ್ರಶಸ್ತಿ' ನೀಡಿ ಗೌರವಿಸಲಾಯಿತು. ಸರ್ಕಾರೇತರ ಸಂಸ್ಥೆಯಿಂದ ಈ ಪ್ರಶಸ್ತಿಗಳನ್ನು ನೀಡಲಾಗಿದೆ. ಈ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಈ ಪ್ರಶಸ್ತಿಯು ಸಂಸದರ ಅತ್ಯುತ್ತಮ ಕಾರ್ಯನಿರ್ವಹಿಸುವಿಕೆಯ ಪ್ರತೀಕವಾಗಿದೆ ಎಂದರು. ಇದೇ ವೇಳೆ, ಪ್ರಶಸ್ತಿಯನ್ನು ಸ್ವೀಕರಿಸಿದ ಎಲ್ಲಾ ಸಂಸದರನ್ನು ಅಭಿನಂದಿಸಿದರು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು,

ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><*<><>*><>

೧೯೯೯ರ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಭಾರತೀಯ ಸೈನಿಕರ ಶೌರ್ಯವನ್ನು ಗೌರವಿಸಲು ಇಂದು ದೇಶಾದ್ಯಂತ ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಗುತ್ತಿದೆ. ಯುದ್ಧದಲ್ಲಿ, ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯ ಮತ್ತು ಆಪರೇಷನ್ ವಿಜಯ್‌ನ ಯಶಸ್ಸಿನ ೨೬ನೇ ವಾರ್ಷಿಕೋತ್ಸವವನ್ನು ಇಂದು ಆಚರಿಸಲಾಗುತ್ತಿದೆ. ಸೇನಾ ಕಾರ್ಯಾಚರಣೆ ಸಮಯದಲ್ಲಿ, ಭಾರತೀಯ ಸಶಸ್ತ್ರ ಪಡೆಗಳು ತೀವ್ರ ಹವಾಮಾನ ಪರಿಸ್ಥಿತಿ ನಡುವೆ ಜಮ್ಮು ಮತ್ತು ಕಾಶ್ಮೀರದ ಕಠಿಣ ಭೂ ಪ್ರದೇಶ ಹೊಂದಿರುವ ಕಾರ್ಗಿಲ್ ಜಿಲ್ಲೆಯಲ್ಲಿ ಪಾಕಿಸ್ತಾನಿ ಸೈನಿಕರು ಮತ್ತು ಉಗ್ರಗಾಮಿಗಳು ನುಸುಳಿದ್ದ ಪ್ರದೇಶಗಳನ್ನು ಮರಳಿ ಪಡೆದುಕೊಂಡವು. ಕಾರ್ಗಿಲ್ ವಿಜಯ್ ದಿವಸದ ಹಿನ್ನಲೆ ಇಂದು ಭಾರತೀಯ ಜನತಾ ಪಕ್ಷವು ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ಕಾರ್ಗಿಲ್ ವಿಜಯ್ ದಿವಸ್ ಸಮಾರಂಭವನ್ನು ಆಯೋಜನೆ ಮಾಡಿತ್ತು. ಕೇಂದ್ರ ಸಚಿವ ಹಾಗೂ ಬಿಜೆಪಿ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ ಮತ್ತು ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಜೆ.ಪಿ.ನಡ್ಡಾ, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ಸ್ವಾವಲಂಬಿಯಾಗುತ್ತಿದೆ. ಪ್ರಸ್ತುತ ಭಾರತವು ಬುಲೆಟ್ ಪ್ರೂಫ್ ಜಾಕೆಟ್‌ಗಳನ್ನು ತಯಾರಿಸುವುದರೊಂದಿಗೆ ಅವುಗಳನ್ನು ಜಗತ್ತಿಗೆ ರಫ್ತು ಮಾಡುತ್ತಿದೆ ಎಂದು ತಿಳಿಸಿದರು. ಕಾರ್ಗಿಲ್ ವಿಜಯ್ ದಿವಸ್ ಆಚರಣೆಯ ಸಂದರ್ಭದಲ್ಲಿ, ಉತ್ತರಾಖಂಡ ಮುಖ್ಯಮಂತ್ರಿ ಪು?ರ್ ಸಿಂಗ್ ಧಾಮಿ ಭಾರತದ ಅತ್ಯಂತ ಗೌರವಾನ್ವಿತ ಯುದ್ಧ ವೀರರಿಗೆ ಪರಿಹಾರವನ್ನು ಗಣನೀಯವಾಗಿ ಹೆಚ್ಚಿಸುವುದಾಗಿ ಘೋಷಿಸಿದ್ದಾರೆ. ಭಾರತದ ಅತ್ಯುನ್ನತ ಮಿಲಿಟರಿ ಗೌರವವಾದ ಪರಮ ವೀರ ಚಕ್ರವನ್ನು ಪಡೆದ ಸೈನಿಕರು ಈಗ ೧.೫ ಕೋಟಿ ರೂಪಾಯಿ ಪಡೆಯಲಿದ್ದಾರೆ, ಇದು ಹಿಂದಿನ ೫೦ ಲಕ್ಷ ರೂ.ಗಳಿಗಿಂತ ಮೂರು ಪಟ್ಟು ಹೆಚ್ಚಾಗಿದೆ. ಈ ಕ್ರಮವನ್ನು "ಶೌರ್ಯಕ್ಕೆ ಅಚಲ ಗೌರವದ ಸಂಕೇತ" ಎಂದು ಕರೆದ ಅವರು ಉತ್ತರಾಖಂಡ ಸರ್ಕಾರವು ಸೈನಿಕರು, ಮಾಜಿ ಸೈನಿಕರು ಮತ್ತು ಹುತಾತ್ಮರ ಕುಟುಂಬಗಳ ಗೌರವ, ಕಲ್ಯಾಣ ಮತ್ತು ಘನತೆಗೆ ಬದ್ಧವಾಗಿದೆ ಎಂದು ಹೇಳಿದರು. "ಪರಮ ವೀರ ಚಕ್ರ ಪ್ರಶಸ್ತಿ ಪುರಸ್ಕೃತರಿಗೆ ನೀಡಲಾಗುವ ಎಕ್ಸ್ ಗ್ರೇಷಿಯಾವನ್ನು ೫೦ ಲಕ್ಷ ರೂ.ಗಳಿಂದ ೧.೫ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಇದು ನಮ್ಮ ಸರ್ಕಾರದ ಶೌರ್ಯವನ್ನು ಗೌರವಿಸುವ ಅಚಲ ನಂಬಿಕೆಯ ಸಂಕೇತವಾಗಿದೆ" ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ೧೯೯೯ ರ ಕಾರ್ಗಿಲ್ ಯುದ್ಧದಲ್ಲಿ ತಮ್ಮ ಪ್ರಾಣವನ್ನೇ ಅರ್ಪಿಸಿದ ವೀರ ಸೈನಿಕರಿಗೆ ಗೌರವ ಸಲ್ಲಿಸುತ್ತಾ, ಮುಖ್ಯಮಂತ್ರಿಧಾಮಿ ಡೆಹ್ರಾಡೂನ್‌ನ ಗಾಂಧಿ ಪಾರ್ಕ್‌ನಲ್ಲಿ ನಡೆದ ಸಮಾರಂಭದಲ್ಲಿ ಭಾಗವಹಿಸಿದರು.

<><*<><>*><>

ಜಾರ್ಜಿಯಾದ ಬಟುಮಿಯಲ್ಲಿ ನಡೆಯುತ್ತಿರುವ ಫಿಡೆ ಮಹಿಳಾ ವಿಶ್ವಕಪ್ ೨೦೨೫ ಚೆಸ್ ಫೈನಲ್ ಪಂದ್ಯದಲ್ಲಿ ಭಾರತೀಯರೇ ಆದ ಕೊನೆರು ಹಂಪಿ ಮತ್ತು ದಿವ್ಯಾ ದೇಶಮುಖ್ ಮುಖಾಮುಖಿಯಾಗಿದ್ದಾರೆ. ಈ ಭಾರತೀಯ ಆಟಗಾರ್ತಿಯರ ನಡುವಿನ ಹಣಾಹಣಿಯು ಮುಂದಿನ ವರ್ಷದ ಎಫ್‌ಐಡಿಇ ಮಹಿಳಾ ಅಭ್ಯರ್ಥಿಗಳ ಟೂರ್ನಮೆಂಟ್‌ನಲ್ಲಿ ಸ್ಥಾನವನ್ನು ಖಾತರಿಪಡಿಸಕೊಳ್ಳಲಿದೆ. ಇಲ್ಲಿ ವಿಜೇತರಾದವರು ವಿಶ್ವ ಚಾಂಪಿಯನ್‌ಶಿಪ್ ಪ್ರಶಸ್ತಿಗಾಗಿ ಜು ವೆಂಜುನ್ ವಿರುದ್ಧ ಆಟವಾಡಲಿದ್ದಾರೆ.

<><*<><>*><>

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ ನಾಲ್ಕನೇ ಟೆಸ್ಟ್ ಪಂದ್ಯದಲ್ಲಿ, ೪ನೇ ದಿನವಾದ ಇಂದು ಆತಿಥೇಯ ಇಂಗ್ಲೆಂಡ್ ವಿರುದ್ಧ ಎರಡನೇ ಇನ್ನಿಂಗ್ಸ್ ಆರಂಭಿಸಿರುವ ಭಾರತ ೨ ವಿಕೆಟ್‌ಗಳಿಗೆ ೬೫ ರನ್ ಮಾಡಿ ಆಡುತ್ತಿದೆ. ಇದಕ್ಕೂ ಮುನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ೬೬೯ ರನ್‌ಗಳಿಗೆ ಆಲೌಟ್ ಆಗಿದ್ದು, ೩೧೧ ರನ್‌ಗಳ ಮುನ್ನಡೆ ಸಾಧಿಸಿದೆ. ಇಂಗ್ಲೆಂಡ್‌ನ ಬ್ಯಾಟರ್ ಜೋ ರೂಟ್ ೨೪೮ ಎಸೆತಗಳಲ್ಲಿ ೧೫೦ ರನ್ ಗಳಿಸುವ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ ಎರಡನೇ ಅತಿ ಹೆಚ್ಚು ರನ್ ಗಳಿಸಿದ ಆಟಗಾರರಾಗಿದ್ದಾರೆ. ಆಸ್ಟ್ರೇಲಿಯಾ ಆಟಗಾರ ರಿಕಿ ಪಾಂಟಿಂಗ್ ಅವರ ೧೩ ಸಾವಿರದ ೩೭೮ ರನ್‌ಗಳನ್ನು ಮೀರಿಸಿದ್ದಾರೆ. ಕ್ರಿಕೆಟ್‌ನ ದಂತಕಥೆ ಸಚಿನ್ ತೆಂಡೂಲ್ಕರ್ ಸಾರ್ವಕಾಲಿಕ ಟೆಸ್ಟ್ ರನ್ ಗಳಿಸಿದವರ ಪಟ್ಟಿಯಲ್ಲಿ ೧೫ ಸಾವಿರದ ೯೨೧ ರನ್‌ಗಳೊಂದಿಗೆ ಅಗ್ರಸ್ಥಾನದಲ್ಲಿದ್ದಾರೆ. ಭಾರತದ ಪರ ರವೀಂದ್ರ ಜಡೇಜಾ ೪ ವಿಕೆಟ್‌ಗಳನ್ನು ಕಬಳಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರವು ಬಾಹ್ಯಾಕಾಶ ವಲಯದಂತೆ ಪರಮಾಣು ಇಂಧನ ವಲಯವನ್ನು ಸ್ಥಾಪಿಸಲು ಯೋಜಿಸುತ್ತಿದೆ ಎಂದು ಪ್ರಧಾನಿ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಪಿ.ಕೆ.ಮಿಶ್ರಾ ಹೇಳಿದ್ದಾರೆ. ಮುಂಬೈನ ಭಾಭಾ ಪರಮಾಣು ಸಂಶೋಧನಾ ಕೇಂದ್ರ ತರಬೇತಿ ಶಾಲೆಯಲ್ಲಿ ನಡೆದ ೬೮ನೇ ಬ್ಯಾಚ್‌ನ ವೈಜ್ಞಾನಿಕ ಅಧಿಕಾರಿಗಳನ್ನುದ್ದೇಶಿಸಿ ಅವರು ಮಾತನಾಡಿದರು. ಬಾಹ್ಯಾಕಾಶ ವಲಯದ ಯಶಸ್ವಿ ಉದ್ಘಾಟನೆಯನ್ನು ಉಲ್ಲೇಖಿಸಿದ ಅವರು, ಶುದ್ಧ ಇಂಧನ ಮತ್ತು ರಾಷ್ಟ್ರೀಯ ಭದ್ರತೆಗೆ ಅಗತ್ಯವಾದ ಪರಮಾಣು ಶಕ್ತಿಗಾಗಿ ಇದೇ ರೀತಿಯ ಉಪಕ್ರಮಗಳನ್ನು ಕಲ್ಪಿಸಲಾಗಿದೆ ಎಂದು ಹೇಳಿದರು. ೨೦೨೪-೨೫ರ ಕೇಂದ್ರ ಬಜೆಟ್ ಅಡಿಯಲ್ಲಿ ಕೇಂದ್ರ ಸರ್ಕಾರ, ಎಮ್.ಎಸ್.ಎಮ್.ಇ ವಲಯಕ್ಕೆ ೫೦ ಬಹು-ಉತ್ಪನ್ನ ಆಹಾರ ವಿಕಿರಣ ಘಟಕಗಳನ್ನು ಮಂಜೂರು ಮಾಡಿದೆ ಎಂದು ತಿಳಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ <>*><>**